**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಡೂರು**

**ಸಿ.ಸಿ. ನಂಬರು 1853/2024**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಪರಮೇಶ್ವರಪ್ಪ | ಚಾಸಾ.2 |
| ತಂದೆಯ ಹೆಸರು | : | ರಂಗಪ್ಪ | ಫ್ರಾಸಾ.1 |
| ವಯಸ್ಸು | : | 55 ವರ್ಷ | |
| ವೃತ್ತಿ | : | ವಾಟರ್ ಮ್ಯಾನ್ ಕೆಲಸ | |
| ವಾಸಸ್ಥಳ | : | 9 ನೇ ಕ್ರಾಸ್, ವಿಜಯನಹಳ್ಳಿ, ಕಡೂರು | |

**ದಿನಾಂಕ 02.08.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ :ಮಾನ್ಯ ಎ.ಪಿ.ಪಿ. ರವರಿಂದ :-**

ಆರೋಪಿಯ ಪರಿಚಯ ಇರುತ್ತದೆ. ಚಾಸಾ-2 ರವರ ಪರಿಚಯಸ್ಥರು. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನನ್ನ ಮುಂದೆ ಪೋಲೀಸರು ಯಾವುದೇ ನೋಟೀಸನ್ನು ನೀಡಿರುವುದಿಲ್ಲ. ಸಾಕ್ಷಿಯು ನೋಟೀಸನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ.1 ಎಂದು, ಅದರಲ್ಲಿರುವ ತನ್ನ ಸಹಿಯನ್ನು ನಿಪಿ.1 ಎ ಎಂದು ಗುರುತಿಸಲಾಯಿತು. ಸದರಿ ನಿಪಿ.1 ರ ನೋಟೀಸಿಗೆ ಎಲ್ಲಿ, ಯಾವಾಗ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿಪಿ.1 ರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ.

ನನ್ನ ಮುಂದೆ ಪೋಲೀಸರು ಯಾವುದೇ ಸ್ಥಳ ಮಹಜರನ್ನು ಜರುಗಿಸಿರುವುದಿಲ್ಲ. ಸಾಕ್ಷಿಯು ಮಹಜರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.2 ಎಂದು ಅದರಲ್ಲಿರುವ ತನ್ನ ಸಹಿಯನ್ನು ನಿಪಿ.2 ಎ ಎಂದು ಗುರುತಿಸಲಾಯಿತು. ಸದರಿ ನಿಪಿ.2 ರ ಮಹಜರಿಗೆ ಎಲ್ಲಿ, ಯಾವಾಗ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿಪಿ.2 ರಲ್ಲಿ ಬರೆದ ವಿಚಾರ ನನಗೆ

ಗೊತ್ತಿಲ್ಲ. ಸಾಕ್ಷಿಯು ಒಂದು ಛಾಯಾಚಿತ್ರದಲ್ಲಿ ತಾನು ಇರುವುದಾಗಿ ನೋಡಿ ಗುರುತಿಸಿದ್ದು, ಅದನ್ನು ನಿಪಿ.3 ಎಂದು ಗುರುತಿಸಲಾಯಿತು. ಸದರಿ ಛಾಯಾಚಿತ್ರವನ್ನು ಯಾವಾಗ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ. ನನ್ನ ಮುಂದೆ ಯಾವುದೇ ವಸ್ತುವನ್ನು ವಶಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮುದ್ದೆಮಾಲನ್ನು ನೋಡಿ ಗುರುತಿಸಿದ್ದು ಅದನ್ನು ಮು.ಮಾ-1 ಎಂದು, ಅದರಲ್ಲಿರುವ ತನ್ನ ಸಹಿಯನ್ನು ಮು.ಮಾ-1 ಎ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)

**ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-**

ದಿನಾಂಕ 08.04.2024 ರಂದು ಪೊಲೀಸರು ನನಗೆ ಮತ್ತು ಚಾಸಾ-3 ರವರಿಗೆ ನಿಪಿ.1 ರಂತೆ ನೋಟೀಸು ಜಾರಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಅದೇ ದಿನ ಮಧ್ಯಾಹ್ನ 1.40 ಗಂಟೆಯಿಂದ 2.15 ಗಂಟೆಯವರೆಗು ನಿಪಿ.2 ರಂತೆ ಮಹಜರನ್ನು ಜರುಗಿಸಿ, ನಿಪಿ.3 ತೆ ಛಾಯಾಚಿತ್ರವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ 90 ಎಂ.ಎಲ್.ನ 45 ರಾಜಾವಿಸ್ಕಿ ಮಧ್ಯದ ಪೌಚುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :- ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.**

**ಮರುವಿಚಾರಣೆಃ ಇರುವುದಿಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಓ

sd/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

ಜೆಎಂಎಫ್‌ಸಿ, ಕಡೂರು